# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **372** |
| ಉತ್ತರಿಸಬೇಕಾದ ದಿನಾಂಕ | : | 21.12.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಮೂರು ವರ್ಷಗಳಿಂದ ರಾಜ್ಯದ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಎಷ್ಟು ಮನೆಗಳಿಗೆ ಅನುಮೋದನೆಯನ್ನು ನೀಡಲಾಗಿದೆ; ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಿ ಮನೆಗಳನ್ನು ವಿತರಿಸಲಾಗಿದೆ;</td><td>2019-20 ರಿಂದ 2021-22 ರವರೆಗೆ ರಾಜ್ಯದ ವಿವಿಧ ವಸತಿ ಯೋಜನೆಗಳಡಿ ಒಟ್ಟು 385771 ಮನೆಗಳು ಮಂಜೂರು ಮಾಡಲಾಗಿದೆ. ವಿವರ ಕೆಳಕಂಡಂತಿದೆ.
<table>
<tr><th>ಯೋಜನೆ</th><th>ಮಂಜೂರಾದ ಮನೆಗಳು</th></tr>
<tr><td>ಬಸವ ವಸತಿ</td><td>139238</td></tr>
<tr><td>ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ್ (ಗ್ರಾ)</td><td>46012</td></tr>
<tr><td>ದೇವರಾಜು ಅರಸು ವಸತಿ (ಗ್ರಾ)</td><td>34260</td></tr>
<tr><td>ಪ್ರಧಾನ ಮಂತ್ರಿ ಆವಾಸ್ (ಗ್ರಾ)</td><td>40694</td></tr>
<tr><td>ವಾಜಪೇಯಿ ನಗರ ವಸತಿ</td><td>13197</td></tr>
<tr><td>ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ್ (ನ)</td><td>4541</td></tr>
<tr><td>ದೇವರಾಜು ಅರಸು ವಸತಿ (ನ)</td><td>347</td></tr>
<tr><td>ಪ್ರಧಾನ ಮಂತ್ರಿ ಆವಾಸ್ (ನ)BLC Non Convergence</td><td>61200</td></tr>
<tr><td>ಪ್ರಧಾನ ಮಂತ್ರಿ ಆವಾಸ್ (ನ)AHP</td><td>46282</td></tr>
<tr><td>ಒಟ್ಟು</td><td>385771</td></tr>
</table>
2019-20 ರಿಂದ 2021-22 ರವರೆಗೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಒಟ್ಟು 11739 ಹಕ್ಕುಪತ್ರಗಳನ್ನು ಮತ್ತು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ 61126 ಹಕ್ಕು ಪತ್ರಗಳನ್ನು ನೀಡಲಾಗಿದೆ.</td></tr>
<tr><td>ಆ)</td><td>ರಾಜ್ಯದ ವಸತಿ ಯೋಜನೆಗಳಿಗೆ ಅನುದಾನದ ಕೊರತೆಯಿಂದಾಗಿ, ವಸತಿ ಯೋಜನೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕುಂಠಿತವಾಗಿರುವ ವಸತಿ ಯೋಜನೆಗಳ ವಿವರಗಳನ್ನು ನೀಡುವುದು;</td><td>ವಿವಿಧ ವಸತಿ ಯೋಜನೆಗಳಡಿ ಜಿ.ಪಿ.ಎಸ್ ಆಧಾರಿತ ಭೌತಿಕ ಪ್ರಗತಿಗನುಗುಣವಾಗಿ ಡಿ.ಬಿ.ಟಿ ಮುಖಾಂತರ ಆಧಾರ್ ಜೋಡಣೆಗೊಂಡ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.<br>ಆಗಸ್ಟ್ 2019ರಿಂದ ಇಲ್ಲಿಯವರೆಗೆ ಆಯವ್ಯಯದಲ್ಲಿ ಒಟ್ಟಾರೆ ರೂ.10,585.75 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ನವೆಂಬರ್ ಅಂತ್ಯಕ್ಕೆ ಒಟ್ಟಾರೆ ರೂ.6,914.85 ಕೋಟಿಗಳ ಅನುದಾನವನ್ನು ಖರ್ಚು ಮಾಡಲಾಗಿದೆ. ಯಾವುದೇ ಯೋಜನೆಗಳು ಅನುದಾನದ ಕೊರತೆಯಿಂದ ಕುಂಠಿತವಾಗಿರುವುದಿಲ್ಲ.</td></tr>
</table>

| | | |
|---|---|---|
| ಇ) | ಈ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುದಾನ ಹಾಗೂ ರಾಜ್ಯ ಸರ್ಕಾರದ ಪಾಲುಗಳೆಷ್ಟು; ಈ ಯೋಜನೆಗಳು ಕುಂಠಿತಗೊಳ್ಳಲು ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅನುದಾನದ ಕೊರತೆಯಿದೆಯೇ; (ವಿವರ ನೀಡುವುದು) | ವಿವಿಧ ವಸತಿ ಯೋಜನೆಗಳಡಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲಿನ ಅನುದಾನದ ವಿವರ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ) ರಾಜ್ಯ ಸರ್ಕಾರದ ವಸತಿ ಯೋಜನೆಗಳಡಿ ಪ್ರಗತಿಗನುಗುಣವಾಗಿ ಅರ್ಹ ಫಲಾನುಭವಿಗಳಿಗೆ ಸಹಾಯಧನ ಬಿಡುಗಡೆ ಮಾಡಲಾಗುತ್ತಿದ್ದು, ಅನುದಾನದ ಕೊರತೆಯಾಗಿರುವುದಿಲ್ಲ. |
| ಈ) | ಈ ರೀತಿ ಕುಂಠಿತಗೊಂಡಿರುವ ಯೋಜನೆಗಳ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪ್ರಾರಂಭಿಸಿ ಬಡ ಫಲಾನುಭವಿಗಳಿಗೆ ನೀಡಲು ಸರ್ಕಾರದ ಕ್ರಮವೇನು ? | ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ಎ.ಹೆಚ್.ಪಿ ಘಟಕದಡಿ ಕೇಂದ್ರ ಸರ್ಕಾರವು ಅಕ್ಟೋಬರ್ – 2022 ರಲ್ಲಿ ರೂ.464.41 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಫಲಾನುಭವಿ ನಿರ್ಮಿತ ಮನೆಗಳಿಗೆ(ಬಿ.ಎಲ್.ಸಿ) ಅನುದಾನ ಬಿಡುಗಡೆ ಮಾಡುವ ಸಂಬಂಧ ಈಗಾಗಲೇ ಉಪಯೋಗ ಪ್ರಮಾಣ ಪತ್ರವನ್ನು ಸಲ್ಲಿಸಿ, ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಿದ ಕೂಡಲೇ ಫಲಾನುಭವಿಗಳಿಗೆ ಸಹಾಯಧನ ಬಿಡುಗಡೆಗೊಳಿಸಲು ಕ್ರಮವಹಿಸಲಾಗುವುದು. |

(ರೂ.ಲಕ್ಷಗಳಲ್ಲಿ)

| ಯೋಜನೆ | ರಾಜ್ಯದ ಪಾಲು | | ಕೇಂದ್ರದ ಪಾಲು | |
|---|---|---|---|---|
| | ಸಾಮಾನ್ಯ / ಅ.ಸಂ | ಪ.ಜಾ / ಪ.ಪಂ | ಸಾಮಾನ್ಯ / ಅ.ಸಂ | ಪ.ಜಾ / ಪ.ಪಂ |
| ಬಸವ ವಸತಿ ಯೋಜನೆ | 1.20 | - | - | - |
| ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ - ಗ್ರಾಮೀಣ & ನಗರ | - | 2.00 | - | - |
| ವಾಜಪೇಯಿ ನಗರ ವಸತಿ ಯೋಜನೆ | 1.20 | - | - | - |
| ದೇವರಾಜು ಅರಸು ವಸತಿ ಯೋಜನೆ - ಗ್ರಾಮೀಣ & ನಗರ | 1.20 | 1.50 | - | - |
| ಪ್ರಧಾನ ಮಂತ್ರಿ ಆವಾಸ್ ಯೋಜನೆ ಗ್ರಾಮೀಣ | 0.48 | 1.03 | 0.72 | 0.72 |
| ಪ್ರಧಾನ ಮಂತ್ರಿ ಆವಾಸ್ ಯೋಜನೆ ನಗರ | - | - | 1.50 | 1.50 |

ಸಂಖ್ಯೆ :ವಇ **515** ಹೆಚ್‌ಎಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ
ಸಚಿವರು